ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 16-07-2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಪತ್ರಕರ್ತರಿಗಾಗಿ ಚಲನಚಿತ್ರ ರಸಗ್ರಹಣ ಶಿಬಿರದ ಉದ್ಘಾಟನಾ ಸಮಾರಂಭ<br><br>ಉದ್ಘಾಟನೆ:<br><br>ಪ್ರಕಾಶ್ ರೈ,<br>ಚಿತ್ರನಟ, ನಿರ್ದೇಶಕ, ನಿರ್ಮಾಪಕ<br><br>ಮುಖ್ಯ ಅತಿಥಿಗಳು:<br><br>ಗಿರಿಶ್ ಕಾಸರವಳ್ಳಿ,<br>ಚಿತ್ರ ನಿರ್ದೇಶಕ,<br><br>ಎನ್.ಆರ್. ವಿಶುಕುಮಾರ್,<br>ನಿರ್ದೇಶಕರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ<br><br>ಅಧ್ಯಕ್ಷತೆ:<br><br>ಎಸ್.ವಿ. ರಾಜೇಂದ್ರಸಿಂಗ್ ಬಾಬು<br>ಅಧ್ಯಕ್ಷರು, ಕರ್ನಾಟಕ ಚಲನಚಿತ್ರ ಅಕಾಡೆಮಿ | **17-07-2016**<br>ಭಾನುವಾರ<br><br>ಬೆಳಿಗ್ಗೆ<br>10-30 ಗಂಟೆಗೆ | ಚಾಮುಂಡೇಶ್ವರಿ ಸ್ಟುಡಿಯೋ,<br><br>ಮಿಲ್ಲರ್ಸ್ ರಸ್ತೆ,<br><br>ಬೆಂಗಳೂರು. |
| 2 | ದಿ: ಡಿ. ದೇವರಾಜ ಅರಸು ಜನ್ಮ ಶತಮಾನೋತ್ಸವ ಕ್ರಿಕೆಟ್ ಪಂದ್ಯಾವಳಿ ಸಮಾರೋಪ ಸಮಾರಂಭ:<br><br>ಉದ್ಘಾಟನೆ:<br><br>ಹೆಚ್. ಆಂಜನೇಯ,<br>ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ | **17-07-2016**<br>ಭಾನುವಾರ<br>ಮಧ್ಯಾಹ್ನ<br>2-00 ಗಂಟೆಗೆ | ಸೆಂಟ್ರಲ್ ಕಾಲೇಜು ಆಟದ ಮೈದಾನ, (ಮೈಸೂರು ಬ್ಯಾಂಕ್ ಸರ್ಕಲ್ ಹತ್ತಿರ), ಬೆಂಗಳೂರು. |

| | | | |
|---|---|---|---|
| | ಕಲ್ಯಾಣ ಸಚಿವರು.<br><br>ಅಧ್ಯಕ್ಷತೆ:<br><br>ದಿನೇಶ್ ಗುಂಡೂರಾವ್,<br>ಮಾಜಿ ಸಚಿವರು | | |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ರಾಜ್ಯದ ಪ್ರತಿ ಜಿಲ್ಲೆಗೊಂದು
# ಸರ್ಕಾರಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ ಸ್ಥಾಪನೆ : –

– ಮುಖ್ಯಮಂತ್ರಿ

ಬೆಂಗಳೂರು, ಜುಲೈ 16 (ಕರ್ನಾಟಕ ವಾರ್ತೆ)

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಸರ್ಕಾರಿ ವೈದ್ಯಕೀಯ ಕಾಲೇಜುಗಳು ಇರಬೇಕೆಂಬುದು ರಾಜ್ಯ ಸರ್ಕಾರದ ಸದಾಶಯವಾಗಿದ್ದು, ಸರ್ಕಾರಿ ವೈದ್ಯಕೀಯ ಕಾಲೇಜುಗಳು ಇಲ್ಲದ ಜಿಲ್ಲೆಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನುಸ್ಥಾಪಿಸಲು ನಿರ್ಧರಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಲ್ಲಿ ಇಂದು ಪ್ರಕಟಿಸಿದರು.

ತಮ್ಮ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ರಾಜ್ಯದಲ್ಲಿ 12 ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸಲಾಗಿದೆ.

ಪ್ರತಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ 600 ಕೋಟಿ ರೂ. ವೆಚ್ಚವಾಗಲಿದೆ, ಕಾಲೇಜು ಮತ್ತು ಐದು ನೂರು ಹಾಸಿಗೆಯ ಆಸ್ಪತ್ರೆ, ಗ್ರಂಥಾಲಯ, ಪ್ರಯೋಗಾಲಯ ಸೇರಿದಂತೆ ಪ್ರತಿ ಕಾಲೇಜು ಕಟ್ಟಡ ನಿರ್ಮಾಣಕ್ಕೆ ವೆಚ್ಚ ತಗಲುಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ರಾಜ್ಯದಲ್ಲಿನ ಶೋಷಿತರ, ದುರ್ಬಲ ವರ್ಗದವರ ಪರವಾಗಿ ನಮ್ಮ ಸರ್ಕಾರ ಕೆಲಸ ಮಾಡುತ್ತಿದೆ. ಅನೇಕ ಜನಪರ ಯೋಜನೆಗಳನ್ನು ಜಾರಿಗೊಳಿಸಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಮೂಲಕ ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಹಿಂದುಳಿದ ಜನರನ್ನು ಮುಖ್ಯವಾಹಿನಿಗೆ ತರುವುದೇ ನಮ್ಮ ಸರ್ಕಾರದ ಮುಖ್ಯ ಉದ್ದೇಶ ಎಂದು ಅವರು ತಿಳಿಸಿದರು.

ಇಂದು ಕರ್ನಾಟಕ ಮಾಧ್ಯಮ ಅಕಾಡೆಮಿ ವತಿಯಿಂದ ವಿಕಾಸಸೌಧದ ಸಮ್ಮೇಳನ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ "ಕರ್ನಾಟಕ ಮುನ್ನಡೆ – ಮುಖ್ಯಮಂತ್ರಿಗಳೊಂದಿಗೆ ಪತ್ರಕರ್ತರ ಮಾತುಕತೆ" ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಮಾತನಾಡುತ್ತಿದ್ದ ಅವರು, ಸರ್ಕಾರದ ಜನಪರ ಕಾರ್ಯಕ್ರಮಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೆ ತಲುಪಬೇಕು ಎಂಬುದು ಸರ್ಕಾರದ ಆಶಯವಾಗಿದೆ. ಸರ್ಕಾರದ ಯೋಜನೆಗಳ ಯಶಸ್ಸು ಅಥವಾ ಲೋಪದೋಷಗಳನ್ನು ಪರಿಣಾಮಕಾರಿಯಾಗಿ ಬಿಂಬಿಸುವ ಮೂಲಕ ಯೋಜನೆಗಳ ಯಶಸ್ಸಿಗೆ ಮಾಧ್ಯಮಗಳು ಸಹ ಸರ್ಕಾರದೊಂದಿಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ವೈಚಾರಿಕ ಹಾಗೂ ಪ್ರಗತಿಪರ ಚಿಂತನೆವುಳ್ಳ ಪತ್ರಕರ್ತರ ಸಂಖ್ಯೆ ಹೆಚ್ಚಬೇಕು ಎಂದು ಕರೆ ನೀಡಿದ ಅವರು, ಧ್ವನಿ ಇಲ್ಲದಂತಹ, ತಮ್ಮ ಹಕ್ಕುಗಳನ್ನು ಪ್ರತಿಪಾದಿಸಲು ಶಕ್ತಿ ಇಲ್ಲದಂತಹ ಶೋಷಿತ ವರ್ಗದವರ ಸಮಸ್ಯೆಗಳನ್ನು ಮಾಧ್ಯಮಗಳು ಎತ್ತಿ ಹಿಡಿಯಬೇಕು ಎಂದರು.

ತುತ್ತು ಅನ್ನಕ್ಕಾಗಿ ಅಲೆದಾಡುವ ಪರಿಸ್ಥಿತಿ ಬರಬಾರದು ಎಂದು 'ಅನ್ನಭಾಗ್ಯ' ಯೋಜನೆಯನ್ನು ಜಾರಿಗೆ ತರಲಾಗಿದ್ದು, ರಾಜ್ಯವನ್ನು ಕಾಡಿದ ಹಿಂದೆಂದೂ ಕಾಣದಂತಹ ಭೀಕರ ಬರಗಾಲದ ಸಂದರ್ಭದಲ್ಲೂ ಸಹ ಬಡವರ್ಗದವರಿಗೆ ಅನ್ನಭಾಗ್ಯ ಯೋಜನೆಯಿಂದ ಬರಗಾಲದ ಬಿಸಿ ತಟ್ಟಲಿಲ್ಲ. ಈ ಯೋಜನೆಯಡಿ 1.8 ಕೋಟಿ ಕುಟುಂಬಗಳು ಫಲಾನುಭವಿಗಳಾಗಿವೆ ಎಂದರು.

ಬಡ ವಿದ್ಯಾರ್ಥಿಗಳ ವಿದ್ಯಾಭ್ಯಾಸ ಸುಗಮವಾಗಿ ವರ್ಷಕ್ಕೆ ಪ್ರತಿ ವಿದ್ಯಾರ್ಥಿಗೆ ರೂ.15 ಸಾವಿರದಂತೆ ವಿದ್ಯಾರ್ಥಿವೇತನವನ್ನು 87,000 ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆಯಡಿ ನೀಡಲಾಗಿದೆ, ರೈತರಿಗೆ ಕೃಷಿಭಾಗ್ಯ ಯೋಜನೆ, ಮಕ್ಕಳಲ್ಲಿ ಪೌಷ್ಠಿಕಾಂಶ ಹೆಚ್ಚಿಸಲು ಕ್ಷೀರಭಾಗ್ಯ ಯೋಜನೆ, ಶಾಲಾ ಮಕ್ಕಳಿಗೆ ಶೂ ಭಾಗ್ಯ ಸೇರಿದಂತೆ ಮನಸ್ವಿನಿ, ಮೈತ್ರಿ ಮುಂತಾದ ಯೋಜನೆಗಳನ್ನು ಬಡವರ್ಗದ ಜನತೆಯ ಕಲ್ಯಾಣಕ್ಕಾಗಿ ಜಾರಿಗೆ ತಂದು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದರು.

ಯೋಜನಾ ಕಾರ್ಯಕ್ರಮಗಳಲ್ಲಿ ಜನಸಂಖ್ಯೆಗೆ ಅನುಗುಣವಾಗಿ ಅನುದಾನವನ್ನು ಮೀಸಲಿಡಲಾಗುತ್ತಿದ್ದು ಶೇ 17.15 ಪರಿಶಿಷ್ಟ ಜಾತಿ, ಶೇ 6.95 ಪರಿಶಿಷ್ಟ ವರ್ಗಕ್ಕೆ ಒಟ್ಟು ಶೇ 24.1 ಈ ವರ್ಗಕ್ಕೆ ಅನುದಾನ ಮೀಸಲಿಟ್ಟಿದ್ದು, ಕಳೆದ ಮೂರು ವರ್ಷಗಳಲ್ಲಿ 60,000 ಕೋಟಿ ರೂ. ಅನುದಾನವನ್ನು ಎಸ್‌ಸಿಪಿ/ಟಿಎಸ್‌ಪಿ ಯೋಜನೆಗೆ ಖರ್ಚು ಮಾಡಲಾಗಿದೆ. ಇನ್ನು ಎರಡು ವರ್ಷಗಳಲ್ಲಿ ಈ ವರ್ಗದವರಿಗೆ ಒಂದು ಲಕ್ಷ ಕೋಟಿ ರೂ. ಅನುದಾನ ಖರ್ಚು ಮಾಡಲಾಗುವುದು. ಅಂತೆಯೇ ಅಭಿವೃದ್ದಿ ಕಾಮಗಾರಿಗಳಲ್ಲಿ ರೂ. 50 ಲಕ್ಷದವರೆಗೆ ಎಸ್‌ಸಿಪಿ/ಟಿಎಸ್‌ಪಿ ಯೋಜನೆಗಳಿಗೆ ಮೀಸಲಾತಿ ನೀಡಲು ತೀರ್ಮಾನಿಸಲಾಗಿದೆ ಎಂದರು.

ಹಳ್ಳಿಗಾಡಿನ ಬಡ ರೈತರ, ಅಲ್ಪಸಂಖ್ಯಾತ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಲು ಎಲ್ಲಾ ಹೋಬಳಿಗಳಲ್ಲೂ ವಸತಿ ಶಾಲೆಗಳನ್ನು ತೆರೆಯಲು ತೀರ್ಮಾನಿಸಲಾಗಿದೆ ಎಂದರು.

ರಾಜ್ಯದಲ್ಲಿ 2003 ರಿಂದ 2013 ರವರೆಗೆ ಎಲ್ಲಾ ಸರ್ಕಾರದ ಆಡಳಿತ ಅವಧಿಯಲ್ಲೂ 122 ಆತ್ಮಹತ್ಯೆ ಪ್ರಕರಣಗಳು ವರದಿಯಾಗಿವೆ ಎಂದ ಅವರು, ಎಲ್ಲಾ ಸಮಸ್ಯೆಗಳಿಗೂ ಆತ್ಮಹತ್ಯೆಯೇ ಪರಿಹಾರ ಅಲ್ಲ ಎಂದರು.

ಪತ್ರಕರ್ತರ ಸಂವಾದ:

ಉತ್ತರ ಕರ್ನಾಟಕ ಬೀದರ್ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಕ್ಷೀರಭಾಗ್ಯ, ಕ್ಷೀರಧಾರೆ ಯೋಜನೆಗಳು ಪರಿಣಾಮಕಾರಿಯಾಗಿ ಜಾರಿಯಾಗಲು ಪ್ರಚಾರದ ಅವಶ್ಯಕತೆಯಿದೆ ಎಂಬ ಪತ್ರಕರ್ತರೋರ್ವರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು ಪ್ರಚಾರಕ್ಕೆ ಮುಂದಿನ ದಿನಗಳಲ್ಲಿ ಹೆಚ್ಚಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

'ಮುಖ್ಯಮಂತ್ರಿಗಳಾಗಿ ಚಾಮರಾಜನಗರ ಜಿಲ್ಲೆಗೆ ಆರು ಬಾರಿ ತಾವು ಭೇಟಿ ನೀಡುವ ಮೂಲಕ ಜಿಲ್ಲೆಗೆ ಅಂಟಿದ ಕಳಂಕವನ್ನು ತೊಡೆದು ಹಾಕಿರುವುದು ಸರಿ, ಆದರೆ ಜಿಲ್ಲೆಯ ಅಭಿವೃದ್ಧಿ ಸುದ್ದಿಯಾಗಲಿಲ್ಲ' ಎಂಬ ಪತ್ರಕರ್ತರೋರ್ವರ ಸಲಹೆಗೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿಗಳು ಚಾಮರಾಜನಗರ ಜಿಲ್ಲೆಗೆ ಹೊಸ ಮೆಡಿಕಲ್ ಕಾಲೇಜು ಮಂಜೂರು ಮಾಡಿದ್ದು, ಈ ಬಾರಿಯ ಬಜೆಟ್‌ನಲ್ಲಿ 50 ಕೋಟಿ ರೂ. ಗಳ ವಿಶೇಷ ಅನುದಾನವನ್ನು ಚಾಮರಾಜನಗರ ನಗರ ಅಭಿವೃದ್ಧಿಗೆ ಒದಗಿಸಲಾಗಿದೆ ಎಂದರು.

ಕಲಬುರಗಿ ಜಿಲ್ಲೆಯ ಜೇವರ್ಗಿ ತಾಲ್ಲೂಕಿನ ಖಾದ್ಯಪುರ ಗ್ರಾಮದ ಗ್ರಾಮಸ್ಥರು ಈವರೆಗೆ ಬಸ್ಸುಗಳನ್ನೇ ನೋಡಿಲ್ಲ.ಈಗಲೂ ಟಾಮ್ ಟಾಮ್ ಸೇರಿದಂತೆ ಪರ್ಯಾಯ ವ್ಯವಸ್ಥೆಯನ್ನು ಸಾರಿಗೆಗೆ ಅವಲಂಭಿಸಿದ್ದಾರೆ.ಇಂತಹ ಅನೇಕ ಹಳ್ಳಿಗಳು ಇಲ್ಲಿವೆ ಎಂಬ ಗಂಭೀರ ವಿಷಯವನ್ನು ಪತ್ರಕರ್ತರೋರ್ವರು ತಿಳಿಸಿದಾಗ ಅದಕ್ಕೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿಗಳು ಉತ್ತಮ ರಸ್ತೆಗಳಿದ್ದರೆ ವಾಣಿಜ್ಯ ವಹಿವಾಟು ಗರಿಗೆದರುತ್ತವೆ. ಸಾರಿಗೆ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಶೀಘ್ರವೇ ತಪಾಸಣೆ ನಡೆಸಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಹಾಲು ಒಕ್ಕೂಟಗಳು ಹಾಲಿಗೆ ನೀಡುತ್ತಿರುವ 2 ರೂ. ಹಾಲಿನ ದರವನ್ನು ಕಡಿತಗೊಳಿಸಲಾಗಿದೆ ಎಂಬ ಬಳ್ಳಾರಿ ಜಿಲ್ಲೆಯ ಪತ್ರಕರ್ತರ ಆರೋಪಕ್ಕೆ ಉತ್ತರಿಸಿದ ಮುಖ್ಯಮಂತ್ರಿಗಳು ರಾಜ್ಯ ಸರ್ಕಾರ ನೀಡುತ್ತಿರುವ ಸಬ್ಸಿಡಿ ಹಣ ಎಲ್ಲಿಯೂ ಕಡಿತಗೊಳಿಸಿಲ್ಲ. ಆದರೂ ಹಾಲು ಯೂನಿಯನ್‌ಗಳು ದರ ಕಡಿತಗೊಳಿಸಿರುವ ಬಗ್ಗೆ ದೂರು ಕೇಳಿ ಬರುತ್ತಿದ್ದು, ಈ ನಿಟ್ಟಿನಲ್ಲಿ ಈಗಾಗಲೇ ಯೂನಿಯನ್‌ಗಳಿಗೆ ಸುತ್ತೋಲೆ ನೀಡಲಾಗಿದೆ ಎಂದರು.

ಭದ್ರಾವತಿಯ ಕಾಗದ ಕಾರ್ಖಾನೆ ಮುಚ್ಚಿದ್ದು, ಕಾರ್ಮಿಕರು ಬೀದಿಗೆ ಬಿದ್ದಿದ್ದಾರೆ. ಈ ಕಾರ್ಮಿಕರ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ಎಂದು ಶಿವಮೊಗ್ಗದ ಪತ್ರಕರ್ತರೊಬ್ಬರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು ಭದ್ರಾವತಿಯ ನಷ್ಟಕ್ಕೊಳಗಾಗಿರುವ ಘಟಕದ ಬಗ್ಗೆ ಈಗಾಗಲೇ ಕೈಗಾರಿಕಾ ಸಚಿವರೊಂದಿಗೆ ಈ ಸಂಬಂಧ ಚರ್ಚಿಸಿದ್ದು ಸ್ವಯಂ ನಿವೃತ್ತಿ ಯೋಜನೆಯನ್ನು ಕಾರ್ಮಿಕರಿಗೆ ತರಲು ಚಿಂತಿಸಲಾಗುತ್ತಿದೆ ಎಂದರು.

ರಾಮನಗರ ಜಿಲ್ಲೆಯ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು ರೇಷ್ಮೆಗೂಡಿನ ದರ ಕುಸಿತ ಕುರಿತಂತೆ ತಜ್ಞರಾದ ಬಸವರಾಜು ಅಧ್ಯಕ್ಷತೆಯ ಸಮಿತಿ ವರದಿ ನೀಡಿದ್ದು ಅದರನ್ವಯ ಕ್ರಮ ಕೈಗೊಳ್ಳಲಾಗುವುದು ಎಂದರು.

ಹೊಸ ತಂತ್ರಜ್ಞಾನ ಅಳವಡಿಸುವ ಮೂಲಕ ತುಂಗಾಭದ್ರ ಜಲಾಶಯದ ಹೂಳೆತ್ತುವ ಯೋಜನೆಯ ಬಗ್ಗೆ ಚಿಂತಿಸಲಾಗುವುದು ಎಂದು ಪತ್ರಕರ್ತರೋರ್ವರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು, ಹೈದ್ರಾವಬಾದ್ ಕರ್ನಾಟಕ ಪ್ರದೇಶಗಳಿಗೆ ಅನ್ವಯವಾಗುವಂತೆ 371 ಜೆ ಪ್ರಕಾರ 30,000 ಹುದ್ದೆಗಳು ಖಾಲಿಯಿದ್ದು ಈ ಪೈಕಿ 9,500 ಹುದ್ದೆಗಳನ್ನು ಭರ್ತಿಮಾಡಲಾಗಿದ್ದು, ಹತ್ತು ಸಾವಿರ ಹುದ್ದೆಗಳು ಕೆ.ಪಿ.ಎಸ್.ಸಿ.ಯ ವಿವಿಧ ಹಂತಗಳಲ್ಲಿ ನೇಮಕಾತಿಗೆ ಬಾಕಿಯಿದ್ದು,ಇನ್ನೂ 10 ಸಾವಿರ ಹುದ್ದೆಗಳ ನೇಮಕಾತಿಗೆ ಶೀಘ್ರವೇ ಕ್ರಮ ಕೈಗೊಳ್ಳಲಾಗುವುದು ಎಂದು ಮತ್ತೋರ್ವ ಪ್ರಶ್ನೆಗೆ ಉತ್ತರಿಸಿದರು.

ಪತ್ರಕರ್ತೆಯೋರ್ವರು ದೇವದಾಸಿಯರ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು ದೇವದಾಸಿ ಪದ್ಧತಿಯನ್ನು ಸಂಪೂರ್ಣವಾಗಿ ತೊಡೆದು ಹಾಕಲು ರಾಜ್ಯ ಸರ್ಕಾರ ಕ್ರಮಕೈಗೊಂಡಿದ್ದು ದೇವದಾಸಿಯರ ಮಾಶಾಸನವನ್ನು ಈಗಾಗಲೆ ಹೆಚ್ಚಳ ಮಾಡಿದ್ದು ದೇವದಾಸಿಯರ ಹೆಣ್ಣುಮಕ್ಕಳಿಗೆ ಹೋಬಳಿಮಟ್ಟದ ವಸತಿ ಶಾಲೆಯಲ್ಲಿ ಶಿಕ್ಷಣ ಕಲ್ಪಿಸಲಾಗುವುದು ಎಂದರು.

ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷ ಸಿ.ಎಂ. ಸಿದ್ದರಾಜು ಅವರು ಮಾತನಾಡಿ, ಮಾಧ್ಯಮ ಅಕಾಡೆಮಿಯ 35 ವರ್ಷಗಳ ಇತಿಹಾಸದಲ್ಲಿ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಬಿಡಿ ಪತ್ರಕರ್ತರು ಮತ್ತು ಜಿಲ್ಲಾ ಮಟ್ಟದ ಪತ್ರಕರ್ತರೊಂದಿಗೆ ಮುಖ್ಯಮಂತ್ರಿಗಳು ಸಂವಾದ ನಡೆಸುತ್ತಿರುವುದು ಇದೇ ಮೊದಲು. ಸರ್ಕಾರದ ಭಾಗ್ಯಗಳ ಘೋಷಣೆಗೆ ಪತ್ರಕರ್ತರೇ ಪ್ರೇರಣೆ. ಮುಂದಿನ ದಿನಗಳಲ್ಲಿ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಪತ್ರಕರ್ತರೊಂದಿಗೆ ಸಂವಾದ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದರು.

ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪಡೆದ ಬಡ ವಿದ್ಯಾರ್ಥಿಗಳಿಗೆ ಹತ್ತು ತಿಂಗಳವರೆಗೆ ಕೌಶಲ್ಯ ಅಭಿವೃದ್ಧಿ ಕುರಿತು ಮಾಧ್ಯಮ ಅಕಾಡೆಮಿ ವತಿಯಿಂದ ತರಬೇತಿ ನೀಡಲಾಗುವುದು. ಮುಂದಿನ ವರ್ಷದಿಂದ ಈ ನೂತನ ಕಾರ್ಯಕ್ರಮ ಜಾರಿಗೆ ತರಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಸಚಿವ ಹೆಚ್. ಆಂಜನೇಯ, ಹಿರಿಯ ಪತ್ರಕರ್ತರರಾದ ಸನತ್ ಕುಮಾರ್ ಬೆಳಗಲಿ, ಎಲ್. ಪ್ರಕಾಶ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್.ಆರ್. ವಿಶುಕುಮಾರ್ ಅವರು ಸೇರಿದಂತೆ ರಾಜ್ಯಾದ್ಯಂತ ಆಗಮಿಸಿದ್ದ ಪತ್ರಕರ್ತರು ಸಂವಾದ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಕಾರ್ಯಕ್ರಮದ ಕೊನೆಯಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿಯ ವತಿಯಿಂದ ಮುಖ್ಯಮಂತ್ರಿಗಳನ್ನು ಸನ್ಮಾನಿಸಲಾಯಿತು.

ಮಮತಾ/ಜಡಿಯಪ್ಪ/:ಜಿಪಿಆರ್.

# ಫಲಿತಾಂಶ ಪ್ರಕಟ

ಬೆಂಗಳೂರು, ಜುಲೈ 16 (ಕರ್ನಾಟಕ ವಾರ್ತೆ)

ರಾಷ್ಟ್ರೀಯ ಶಿಶಿಕ್ಷು ತರಬೇತಿ ಯೋಜನೆಯಡಿಯಲ್ಲಿ ಏಪ್ರಿಲ್‌ನಲ್ಲಿ ನಡೆದ ಅಖಿಲ ಭಾರತ ವೃತ್ತಿ ಪರೀಕ್ಷೆ (ಶಿಶಿಕ್ಷು)ಯ ಫಲಿತಾಂಶವನ್ನು ಸಂಬಂಧಪಟ್ಟ ಪರೀಕ್ಷಾ ಕೇಂದ್ರಗಳಲ್ಲಿ ಹಾಗೂ ವಿಭಾಗೀಯ ಕಚೇರಿಗಳಲ್ಲಿ ಜುಲೈ 18 ರಂದು ಸಂಜೆ 4-00 ಗಂಟೆಗೆ ಪ್ರಕಟಿಸಲಾಗುವುದು. ಅಂಕಪಟ್ಟಿಗಳನ್ನು ಆಗಸ್ಟ್

**10 ರ ನಂತರ ಪರೀಕ್ಷಾ ಕೇಂದ್ರಗಳ ಪ್ರಾಚಾರ್ಯರನ್ನು ಸಂಪರ್ಕಿಸಬಹುದು. ಜುಲೈ 16 ರಂದು ಬೆಳಿಗ್ಗೆ 11-00 ಗಂಟೆಗೆ ಫಲಿತಾಂಶವನ್ನು ಅಂತರ್ಜಾಲ www.emptrg.kar.nic.in ನಲ್ಲಿ ಪ್ರಕಟಿಸಲಾಗಿದೆ.**

ಬಾಬು:ಜಿಪಿಆರ್.

# RESULTS ANNOUNCED

Bengaluru, July 16 (Karnataka Information)

The results of the 104th All India Trade Test under ATS held during April – 2016 will announced in the Trade Test Centres and Divisional Offices on 18-07-2016 at 4-00 PM. The Apprentices may contact the Principals of the concerned centre's to collect the marks cards after 10-08-2016. The results are also available over the Internet at www.emptrg.kar.nic.in on 16-7-2016 at 11-00 AM.

babu:gpr

# ಕಿರಿಯ ಸಹಾಯಕರ ಹುದ್ದೆ ನೇಮಕಾತಿಗೆ ಮಾಹಿತಿ ಕೋರಿ

ಬೆಂಗಳೂರು, ಜುಲೈ 16 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ನಡೆಸಿದ 2015 ನೇ ಸಾಲಿನ ಕಿರಿಯ ಸಹಾಯಕರು/ದ್ವಿತೀಯ ದಜೆ ಸಹಾಯಕರ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ 1:2 ಅನುಪಾತದಲ್ಲಿ ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹ ಅಭ್ಯರ್ಥಿಗಳನ್ನು ಆಹ್ವಾನಿಸಲಾಗಿದ್ದು, ಅದರಂತೆ ದಿನಾಂಕ 05-06-2016 ರಿಂದ 25-06-2016 ರವರೆಗೆ 'ಆನ್‌ಲೈನ್' ಮೂಲಕ ಇಲಾಖಾ ಆದ್ಯತೆಯನ್ನು ಭರ್ತಿ ಮಾಡಲು ಅವಕಾಶವನ್ನು ಕಲ್ಪಿಸಿಕೊಡಲಾಗಿತ್ತು. ಆದರೆ ಕೆಲವು ಅಭ್ಯರ್ಥಿಗಳು 'ಆನ್‌ಲೈನ್' ಮೂಲಕ ಇಲಾಖಾ ಆದ್ಯತೆಯನ್ನು ಭರ್ತಿಮಾಡದೇ ಇರುವುದು ಆಯೋಗದ ಗಮನಕ್ಕೆ ಬಂದಿರುತ್ತದೆ. ಅದರಂತೆ ಇಲಾಖಾ ಆದ್ಯತೆಯನ್ನು ನೀಡದೇ ಇರುವ ಅರ್ಹ ಅಭ್ಯರ್ಥಿಗಳಿಗೆ ಮಾತ್ರ ಇಲಾಖಾ ಆದ್ಯತೆಯನ್ನು 'ಆನ್‌ಲೈನ್' ಮೂಲಕ ಆಯೋಗದ ಅಂತರ್ಜಾಲ http://kpsc.kar.nic.in ನಲ್ಲಿ ಭರ್ತಿ ಮಾಡಲು ದಿನಾಂಕ:15-07-2016 ರಿಂದ 27-07-2016 (ರಾತ್ರಿ 11-45 ಗಂಟೆಯವರೆಗೆ) ಅವಕಾಶವನ್ನು ಮತ್ತೊಮ್ಮೆ ಕಲ್ಪಿಸಿ ಕೊಡಲಾಗಿದೆ. ಆದುದರಿಂದ ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗಿರುವ ಅಭ್ಯರ್ಥಿಗಳು ಮಾತ್ರ ಅವರುಗಳ ಇಲಾಖಾ ಆದ್ಯತೆಯನ್ನು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ 'ಆನ್‌ಲೈನ್' ಮೂಲಕ ತಪ್ಪದೇ ಭರ್ತಿ ಮಾಡಬೇಕೆಂದು ಆಯೋಗವು ಸೂಚಿಸಿದೆ. ಹಾಗೂ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಭರ್ತಿಮಾಡಿರುವ ಇಲಾಖಾ ಆದ್ಯತಾ ಪಟ್ಟಿಯ ಒಂದು ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ಅದನ್ನು ಅವರುಗಳ ಮಾಹಿತಿಗಾಗಿ ಸಂರಕ್ಷಿಸಿಕೊಳ್ಳಬೇಕೆಂದು ಸೂಚಿಸಿದೆ.

ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗಿ, ಇಲಾಖಾ ಅದ್ಯತೆಯನ್ನು 'ಆನ್‌ಲೈನ್' ಮೂಲಕ ಸಲ್ಲಿಸದೇ ಇರುವ ಅರ್ಹ ಅಭ್ಯರ್ಥಿಗಳಿಗೆ 'ಆನ್‌ಲೈನ್'ಮೂಲಕ ಇಲಾಖಾ ಆದ್ಯತೆಯನ್ನು ಸಲ್ಲಿಸಲು ಸೂಚಿಸಿ ಹಿಂಬರಹಗಳನ್ನು ಸಹ ಅಂಚೆ ಮೂಲಕ ಕಳುಹಿಸಲಾಗುವುದು.

ಬಾಬು:ಜಿಪಿಆರ್.

# ಪತ್ರಕರ್ತರಿಗಾಗಿ ಚಲನಚಿತ್ರ ರಸಗ್ರಹಣ ಶಿಬಿರ

ಕರ್ನಾಟಕ ವಾರ್ತೆ, ಬೆಂಗಳೂರು, ಜುಲೈ 16:

ಚಲನಚಿತ್ರವನ್ನು ವಿಮರ್ಶಾತ್ಮಕವಾಗಿ ಭಿನ್ನ ದೃಷ್ಟಿಯಿಂದ ನೋಡಿ ಅಭ್ಯಯಿಸುವ ನಿಟ್ಟಿನಲ್ಲಿ ಒಂದು ಅಕಾಡೆಮಿಕ್ ಯತ್ನವಾಗಿ ಪತ್ರಕರ್ತರು ಮತ್ತು ಮಾಧ್ಯಮದ ವಿದ್ಯಾರ್ಥಿಗಳಗಾಗಿ ಎರಡು ದಿನಗಳ ಚಲನಚಿತ್ರ ರಸಗ್ರಹಣ ಶಿಬಿರವನ್ನು ಜುಲೈ 17 ಮತ್ತು 18, 2016 ರಂದು ಚಾಮುಂಡೇಶ್ವರಿ ಸ್ಟುಡಿಯೋ, ಮಿಲ್ಲರ್ಸ್ ರಸ್ತೆ, ಬೆಂಗಳೂರು ಇಲ್ಲಿ ಆಯೋಜಿಸಿದೆ.

ಜುಲೈ 17 ರಂದು ಬೆಳಗ್ಗೆ 10.30 ಗಂಟೆಗೆ ಖ್ಯಾತ ನಟ, ನಿರ್ದೇಶಕ ಹಾಗೂ ನಿರ್ಮಾಪಕರಾದ ಪ್ರಕಾಶ್ ರೈ ಕಾರ್ಯಕ್ರಮವನ್ನು ಉದ್ಘಾಟಿಸುವರು. ವಿಷಯ ಪ್ರವೇಶ ಭಾಷಣವನ್ನು ಖ್ಯಾತ ನಿರ್ದೇಶಕ ಗಿರೀಶ್ ಕಾಸರವಳ್ಳಿ ಮಾಡುವರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಿರ್ದೇಶಕರಾದ ಎನ್.ಆರ್. ವಿಶುಕುಮಾರ್, ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷರಾದ ಸಿದ್ಧರಾಜು, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷರಾದ ಸಾ.ರಾ.ಗೋವಿಂದು, ಬೆಂಗಳೂರು ಟಿವಿ ಜರ್ನಲಿಸ್ಟ್ಸ್ ಅಸೋಸಿಯೇಷನ್ ಅಧ್ಯಕ್ಷರಾದ ಬಿ.ಎಸ್. ಸತ್ಯನಾರಾಯಣ, ಚಲನಚಿತ್ರ ನಿರ್ದೇಶಕರ ಸಂಘದ ಅಧ್ಯಕ್ಷರಾದ ಎಂ.ಎಸ್.ರಮೇಶ್ ಭಾಗವಹಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷರಾದ ಎಸ್.ವಿ ರಾಜೇಂದ್ರಸಿಂಗ್ ಬಾಬು, ವಹಿಸಲಿದ್ದಾರೆ.

ಮಧ್ಯಾಹ್ನ 12.00-1.30 ಯವರೆಗೆ "ಸಿನಿಮಾ ಕಟ್ಟುವ ಕ್ರಮ" ಕುರಿತಂತೆ ಚಲನಚಿತ್ರ ನಿರ್ದೇಶಕರಾದ ಪಿ.ಶೇಷಾದ್ರಿ ಮಾತನಾಡಲಿದ್ದಾರೆ. ಮಧ್ಯಾಹ್ನ 2.15-5.00 "ಚಲನಚಿತ್ರ ರಸಗ್ರಹಣ ಹಾಗೂ ವಿಮರ್ಶೆ" – ಪ್ರೊ॥ ಅನಿಲ್ ಝೇಂಕಾರ್, ಪುಣೆ ಫಿಲಂ ಇನ್ಸಿಟ್ಯೂಟ್ ಸಂಜೆ 5.00 ಗಂಟೆಗೆ ಲೋಕಾರ್ನೋ, ಮುಂಬೈ, ಬೆಂಗಳೂರು ಅಂತರರಾಷ್ಟ್ರೀಯ ಚಿತ್ರೋತ್ಸವಗಳಲ್ಲಿ ಪ್ರಶಸ್ತಿ ಪುರಸ್ಕೃತ ಹಾಗೂ ರಾಜ್ಯ ಪ್ರಶಸ್ತಿ ವಿಜೇತ "ತಿಥಿ" ಚಿತ್ರ ಪ್ರದರ್ಶನವಿದೆ.

ಜುಲೈ 18 ರಂದು ಬೆಳಗ್ಗೆ 10.00-11.30 "ಜಾಗತಿಕ, ಭಾರತೀಯ ಹಾಗೂ ಕನ್ನಡ ಚಲನಚಿತ್ರ -ಒಂದು ಕಿರು ನೋಟ" ಕುರಿತಂತೆ ಚಿತ್ರ ತಜ್ಞ ಹೆಚ್.ಎನ್. ನರಹರಿರಾವ್ ಮಾತನಾಡುವರು. ಬೆಳಗ್ಗೆ 11.30-1.30 ಗಂಟೆಯವರೆಗೆ ತಾಂತ್ರಿಕತೆ ಕಲೆಯಾಗುವ ಕ್ರಮ- ಕುರಿತಂತೆ ಖ್ಯಾತ ಚಲನಚಿತ್ರ ಛಾಯಾಗ್ರಾಹಕ ಜಿ.ಎಸ್.ಭಾಸ್ಕರ್ ಹಾಗೂ ಚಲನಚಿತ್ರ ನಿರ್ದೇಶಕರು ಬಿ.ಎಂ.ಗಿರಿರಾಜ್ ಮಾತನಾಡುವರು. ಮಧ್ಯಾಹ್ನ 2.15 ರಿಂದ 4.30 ವರೆಗೆ ಮುಕ್ತ ಸಂವಾದ ನಡೆಯಲಿದ್ದು, ಚಲನಚಿತ್ರ ನಿರ್ದೇಶಕ ಯೋಗರಾಜ್ ಭಟ್, ಚಲನಚಿತ್ರ ನಿರ್ಮಾಪಕರಾದ ರಾಕ್‌ಲೈನ್ ವೆಂಕಟೇಶ್ ಚಲನಚಿತ್ರ ನಿರ್ದೇಶಕಿ ಸುಮನಾ ಕಿತ್ತೂರ್, ಕರ್ನಾಟಕ ಚಲನಚಿತ್ರ ಅಕಾಡೆಮಿ ಸದಸ್ಯರಾದ

ಎನ್.ಆರ್.ನಂಜುಂಡೇಗೌಡ, ಬೆಂಗಳೂರು ಮಿರರ್ ಸಿನಿಮಾ ವರದಿಗಾರ ಶ್ಯಾಮ್ ಪ್ರಾಸಾದ್, ಸಿನಿ ಪತ್ರಕರ್ತರಾದ ಸದಾಶಿವ ಶೆಣೈ , ಪಬ್ಲಿಕ್ ಟಿವಿ ಸಿನಿ ಪತ್ರಕರ್ತರು ಮಹೇಶ್ ಶೆಟ್ಟಿ, ಪ್ರಜಾವಾಣಿ ಸಿನಿ ಪತ್ರಕರ್ತರಾದ ರಘುನಾಥ್.ಚ.ಹ, ಸ್ನೇಹಪ್ರಿಯ ನಾಗರಾಜ್, ಸುಗುಣ, ಕೇಶವಮೂರ್ತಿ, ಪವಿತ್ರ, ಭಾಗವಹಿಸಲಿದ್ದಾರೆ. ಮುಕ್ತ ಸಂವಾದದ ನಿರ್ವಹಣೆಯನ್ನು ಚಲನಚಿತ್ರ ಪತ್ರಕರ್ತರು ಹಾಗೂ ಚಿತ್ರ ಸಾಹಿತಿ ಜೋಗಿ ನಡೆಸಿಕೊಡಲಿದ್ದಾರೆ.

## ರಾಷ್ಟ್ರೀಯ ಕಾರ್ಯಗಾರ

ಕರ್ನಾಟಕ ವಾರ್ತೆ, ಬೆಂಗಳೂರು, ಜುಲೈ 16:

ಕೇಂದ್ರ ಪುರಸ್ಕೃತ ಪರಂಪರಾಗತ ಕೃಷಿ ಯೋಜನೆಯಡಿ ಸಾವಯವ ಕೃಷಿ ಬಗ್ಗೆ ದಕ್ಷಿಣ ಪ್ರಾಂತ್ಯದ ರಾಜ್ಯಗಳ ಒಂದು ದಿನದ ರಾಷ್ಟ್ರೀಯ ಕಾರ್ಯಗಾರವನ್ನು ದಿನಾಂಕ:೧೬-೦೭-೨೦೧೬ ರಂದು ಕೃಷಿ ವಿಶ್ವವಿದ್ಯಾನಿಲಯ ಜಿ.ಕೆ.ವಿ.ಕೆ ಸಭಾಂಗಣದಲ್ಲಿ ಡಾ: ಶಿವಣ್ಣ , ಕುಲಪತಿಗಳು, ಕೃಷಿ ವಿಶ್ವವಿದ್ಯಾನಿಲಯ ಬೆಂಗಳೂರು ಇವರು ಜ್ಯೋತಿ ಬೆಳೆಗಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಡಾ: ಶಿವಣ್ಣ , ಕುಲಪತಿಗಳು ತಮ್ಮ ಉದ್ಘಾಟನಾ ಭಾಷಣದಲ್ಲಿ ನಮ್ಮ ದೇಶದಲ್ಲಿ ಕೃಷಿ ನಡೆದು ಬಂದ ದಾರಿ, ಜನಸಂಖ್ಯಾ ಸ್ಫೋಟಕ್ಕೆ ಅಗತ್ಯವಿರುವ ಆಹಾರ ಉತ್ಪಾದನೆಯ ಅಗತ್ಯತೆ ಮತ್ತು ಸಾವಯವ ಕೃಷಿ ಹಾಗೂ ಉತ್ಪನ್ನಗಳ ಇಂದಿನ ಅವಶ್ಯಕತೆ ಬಗ್ಗೆ ತಿಳಿಸಿದರು. ಹಾಲಿ ಲಭ್ಯವಿರುವ ನೈಸರ್ಗಿಕ ಸಂಪನ್ಮೂಲಗಳ ಸದ್ಬಳಕೆ ಮಾಡಲು ಕರೆ ನೀಡಿದರು. ಉದ್ಘಾಟನಾ ಸಮಾರಂಭದಲ್ಲಿ ಡಾ: ಎ.ಕೆ. ಯಾದವ್ , ಸಲಹೆಗಾರರು, ಅಪೆಡಾ ಇವರು ಜಾಗತಿಕ ಮಟ್ಟದಲ್ಲಿ ಸಾವಯವ ಕೃಷಿ ಉತ್ಪನ್ನಗಳಿಗೆ ಬೇಡಿಕೆ ಬರುತ್ತಿದ್ದು, ಸಾವಯವ ಕೃಷಿ ಉತ್ಪನ್ನವನ್ನು ದೇಶದಲ್ಲಿ ಬಳಕೆದಾರರ ಕೈಗೆಟಕುವ ದರದಲ್ಲಿ ಸಿಗುತ್ತಿಲ್ಲವೆಂದು ತಿಳಿಸಿದರು. ಸಾವಯವ ಕೃಷಿ ಉತ್ಪಾದನೆ ಮತ್ತು ಮಾರುಕಟ್ಟೆಯಲ್ಲಿರುವ ಸವಾಲುಗಳ ಬಗ್ಗೆ ಗಮನ ಸೆಳೆದರು. ಸಾವಯವ ಕೃಷಿಯಲ್ಲಿ ವೈವಿದ್ಯತೆಯನ್ನು ಅಳವಡಿಸಿ ಲಾಭ ಪಡೆಯಬಹುದೆಂದು ತಿಳಿಸುತ್ತಾ, ಸಾವಯವ ಕೃಷಿಯನ್ನು, ಕೇವಲ ರಫ್ತು ಗಮನದಲ್ಲಿಟ್ಟುಕೊಂಡು ಮಾಡದೆ ಸ್ಥಳೀಯ ಬಳಕೆದಾರರನ್ನು ಗಮನದಲ್ಲಿಟ್ಟುಕೊಂಡು ಉತ್ಪಾದಿಸಲು ತಿಳಿಸಿದರು.

ಡಾ: ಎನ್.ವರದರಾಜಲು ನಾಯ್ಡು, ಸಹ ಸಂಶೋಧನಾ ನಿರ್ದೇಶಕರು, ಆಚಾರ್ಯ ರಂಗ ಕೃಷಿ ವಿಶ್ವವಿದ್ಯಾನಿಲಯ, ಹೈದ್ರಾಬಾದ್ ಇವರು ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಆರೋಗ್ಯ ಭದ್ರತೆಯ ದೃಷ್ಟಿಯಿಂದ ಸಾವಯವ ಕೃಷಿಗೆ ಒತ್ತು ನೀಡಲು ಪ್ರಸ್ತಾಪಿಸಿದರು.

ಅಧ್ಯಕ್ಷತೆ ವಹಿಸಿದ ಶ್ರೀ ಬಿ.ವೈ.ಶ್ರೀನಿವಾಸ, ಕೃಷಿ ನಿರ್ದೇಶಕರು, ರಾಜ್ಯದಲ್ಲಿ ಸಾವಯವ ಕೃಷಿ ಬೆಳೆದು ಬಂದ ದಾರಿ, ರಾಜ್ಯದಲ್ಲಿ ಹಮ್ಮಿಕೊಂಡಿರುವ ಸಾವಯವ ಕೃಷಿ ಕಾರ್ಯಕ್ರಮಗಳು, ಸಾಧಿಸಿರುವ ಪ್ರಗತಿ ಮತ್ತು ಸಾವಯವ ಕೃಷಿಯನ್ನು ಪ್ರಚುರ ಪಡಿಸಲು ರಾಜ್ಯವು ತೆಗೆದುಕೊಂಡ ಕ್ರಮಗಳ ಬಗ್ಗೆ ವಿವರಿಸಿದರು.

ಉದ್ಘಾಟನಾ ಸಮಾರಂಭದ ಸ್ವಾಗತ ಮತ್ತು ಪರಂಪರಾಗತ ಕೃಷಿ ಯೋಜನೆಯ ಪ್ರಸ್ತಾವಿಕ ಮಾಹಿತಿಯನ್ನು ಡಾ: ಶೇಷಾದ್ರಿ , ಸಂಶೋಧನಾ ನಿರ್ದೇಶಕರು, ಕೃಷಿ ವಿಶ್ವ ವಿದ್ಯಾನಿಲಯ, ಬೆಂಗಳೂರು ಇವರು ನೆರವೇರಿಸಿದರು.

ಸಮಾರಂಭದಲ್ಲಿ ಶ್ರೀ ಶಿವರಾಜು, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಾವಯವ ಕೃಷಿ ಉತ್ಪನ್ನಗಳ ಪ್ರಮಾಣನ ಸಂಸ್ಥೆ ಹಾಗೂ ಶ್ರೀ ಬಿ. ಎಡ್ವರ್ಡ್ ಸಿಂಗ್, ಸಹಾಯಕ ನಿರ್ದೇಶಕರು, ತಮಿಳುನಾಡು ಸಹ ಭಾಗವಹಿಸಿದ್ದರು.

ಡಾ:ಶಿವಮೂರ್ತಪ್ಪ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಬೀಜ ನಿಗಮ ಇವರ ವಂದನಾರ್ಪಣೆಯೊಂದಿಗೆ ಕಾರ್ಯಕ್ರಮವನ್ನು ಮುಕ್ತಾಯಗೊಳಿಸಲಾಯಿತು.